<u>**ಕರ್ನಾಟಕ ಸರ್ಕಾರ**</u>

<u>**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**</u>

<u>**ಸಿ.ಸಿ.ನಂ.2200/2022**</u>

ಪಿ.ಡಬ್ಲ್ಯೂ: 4

ಸಿ.ಡಬ್ಲ್ಯೂ: 11

ಸಾಕ್ಷಿದಾರರ ಹೆಸರು : ಸುಬ್ರಮಣ್ಯ

ತಂದೆಯ ಹೆಸರು: :ನಾರಾಯಣಪ್ಪ

ವಯಸ್ಸು : **32 ವರ್ಷ**

ಉದ್ಯೋಗ : ಕಾರ್ಪೆಂಟರ್

ವಾಸಸ್ಥಳ : ಬೊಮ್ಮಸರ

<u>**ದಿನಾಂಕ: 06-01-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**</u>

<u>**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ</u>

ಈಗ್ಗೆ ಸುಮಾರು ಎರಡೂವರೆ ವರ್ಷಗಳ ಹಿಂದೆ ನಾನು ಲಕ್ಕವಳ್ಳಿ ಪೊಲೀಸ್ ಠಾಣೆಯಲ್ಲಿ ಸ್ಪೆಂಡರ್ ಬೈಕ್ ವಾಹನವನ್ನು ಬಿಡುಗಡೆ ಮಾಡುವ ವಿಚಾರವಾಗಿ ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲಾತಿಗೆ ಸಹಿ ಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ವಾಹನ ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ನಿಪಿ-9 ಎಂದು, ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಒಂದು ಛಾಯಚಿತ್ರವನ್ನು ತೋರಿಸಲಾಗಿದ್ದು, ಅದರಲ್ಲಿ ತಮ್ಮ ಇರುವಿಕೆಯನ್ನು ಗುರುತಿಸಿದ್ದು, ಅದನ್ನು ನಿಪಿ-10 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

<u>**ಪಾಟೀ ಸವಾಲು:** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ</u>

ದಿನಾಂಕ: **20-05-2022** ರಂದು ಬೆಳಿಗ್ಗೆ **10-00** ರಿಂದ **10-45** ಗಂಟೆಯವರೆಗೆ ಲಕ್ಕವಳ್ಳಿ ಪೊಲೀಸ್ ಠಾಣಾ ಆವರಣದಲ್ಲಿ ಅಪಘಾತದ ವಿಚಾರವಾಗಿ ಪೊಲೀಸರು ಕೆಎ **14** ಇ ಯು **3503** ಬೈಕನ್ನು ಅಮಾನತ್ತು ಮಹಜರ್ ಮಾಡಿ ನಿಮ್ಮ ಸಮಕ್ಷಮದಲ್ಲಿ ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿ.

**<u>ಪಾಟೀ ಸವಾಲು ಃ ಆರೋಪಿ ಪರ</u>** <u>ಶ್ರೀ ಜೆ ಟಿ ಜೆ</u> **<u>ವಕೀಲರಿಂದ.</u>**

ಅಪಘಾತವನ್ನು ನಾನು ಪ್ರತ್ಯಕ್ಷವಾಗಿ ಕಂಡಿರುವುದಿಲ್ಲ. ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ತಿಳಿದಿರುವುದಿಲ್ಲ, ಪೊಲೀಸರು ನನಗೆ ಓದಿ ಹೇಳಿರುವುದಿಲ್ಲ. ವಾಹನವನ್ನು ವಶಪಡಿಸಿಕೊಳ್ಳುತ್ತಿದ್ದೇವೆ ಎಂದು ನನ್ನಹತ್ತಿರ ಸಹಿ ಮಾಡಿಸಿಕೊಂಡಿರುತ್ತಾರೆ. ಬೇರೆ ಯಾವುದೇ ವಿಚಾರ ನನಗೆ ತಿಳಿದಿರುವುದಿಲ್ಲ.

**<u>ಮರುವಿಚಾರಣೆ</u>:** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ/-

1 ನೇ **ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**